## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ ಶಾಂತವ್ವ ದುಂಡಪ್ಪ ಜಂಬಗಿ, ಅಧ್ಯಕ್ಷರು ಮತ್ತು ಶ್ರೀಮತಿ ಸವಿತಾ ಸತ್ಯಾನಂದ ವಾಲೀಕಾರ, ಸದಸ್ಯರು, ಕೋಟ್ಯಾಳ ಗ್ರಾಮ ಪಂಚಾಯತ್, ವಿಜಯಪುರ ತಾಲ್ಲೂಕು & ಜಿಲ್ಲೆ ಇವರುಗಳ ವಿರುದ್ದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರಡಿ ಕ್ರಮ ಜರುಗಿಸುವ ಕುರಿತು.

**ಓದಲಾಗಿದೆ:**

7. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018 ದಿನಾಂಕ:02.02.2019.
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ವಿಜಯಪುರ ಇವರ ಪತ್ರ ಸಂಖ್ಯೆ:ಜಿಪಂಅ/ಗ್ರಾಪಂ/ಸಿಬ್ಬಂದಿ/ಸಿಆರ್–213/2017–18/2000, ದಿ:07–06–2018.
9. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, ಇವರ ಪತ್ರ ಹಾಗೂ ವಿಚಾರಣಾ ವರದಿ ಸಂಖ್ಯೆ:ಪ್ರಾಆಬೆ:ಜಿಪಂ:43(ಎ):ಸಿಆರ್–10:2018–19, ದಿನಾಂಕ:03.10.2019.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5) ರಡಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಮೇಲೆ ದುರ್ವರ್ತನೆ, ಅಧಿಕಾರ ಮತ್ತು ಹಣ ದುರುಪಯೋಗಕ್ಕಾಗಿ ಕ್ರಮಕೈಗೊಳ್ಳುವ ಸಲುವಾಗಿ ವಿಚಾರಣೆ ನಡೆಸುವ ಅಧಿಕಾರವನ್ನು ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸಲಾಗಿದೆ.

ಅದರಂತೆ, ಮೇಲೆ ಓದಲಾದ ಕ್ರಮಾಂಕ (2)ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ವಿಜಯಪುರ ಜಿಲ್ಲೆ ಇವರು ಶ್ರೀಮತಿ ಶಾಂತವ್ವ ದುಂಡಪ್ಪ ಜಂಬಗಿ, ಅಧ್ಯಕ್ಷರು ಮತ್ತು ಶ್ರೀಮತಿ ಸವಿತಾ ಸತ್ಯಾನಂದ ವಾಲೀಕಾರ, ಸದಸ್ಯರು, ಕೋಟ್ಯಾಳ ಗ್ರಾಮ ಪಂಚಾಯತ್, ವಿಜಯಪುರ ತಾಲ್ಲೂಕು & ಜಿಲ್ಲೆ ಇವರುಗಳ ವಿರುದ್ದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರಡಿ ಕೆಳಕಂಡ ಅಂಶದ ಮೇಲೆ ತನಿಖೆಯನ್ನು ನಡೆಸಲು ಕೋರಿರುತ್ತಾರೆ.

- ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯ ಮಾರ್ಗಸೂಚಿಗಳ ಉಲ್ಲಂಘನೆ ಬಗ್ಗೆ.
- 14ನೇ ಹಣಕಾಸು ಯೋಜನೆಯ ಅನುದಾನದಲ್ಲಿ ತಮ್ಮ ಅಥವಾ ತಮ್ಮ ಸಂಬಂಧಿಕರ ಹೆಸರಿನಲ್ಲಿ ಸಕಾರದ ಹಣವನ್ನು ದುರುಪಯೋಗಪಡಿಸಿಕೊಂಡಿರುವ ಬಗ್ಗೆ.

ಮೇಲೆ ಓದಲಾದ ಕ್ರಮಾಂಕ (3)ರ ಪ್ರಸ್ತಾವನೆಯಲ್ಲಿ ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ ಬೆಳಗಾವಿ, ಇವರು ಶ್ರೀಮತಿ ಶಾಂತವ್ವ ದುಂಡಪ್ಪ ಜಂಬಗಿ, ಅಧ್ಯಕ್ಷರು ಮತ್ತು ಶ್ರೀಮತಿ ಸವಿತಾ ಸತ್ಯಾನಂದ ವಾಲೀಕಾರ, ಸದಸ್ಯರು, ಕೋಟ್ಯಾಳ ಗ್ರಾಮ ಪಂಚಾಯತ್, ವಿಜಯಪುರ ತಾಲ್ಲೂಕು & ಜಿಲ್ಲೆ ಇವರುಗಳ

ವಿರುದ್ಧದ ಅವ್ಯವಹಾರಗಳಿಗೆ ಸಂಬಂಧಿಸಿದಂತೆ ವಿಚಾರಣೆಯನ್ನು ಜರುಗಿಸಲಾಗಿರುತ್ತದೆ. ವಿಚಾರಣೆ ಸಮಯದಲ್ಲಿ ವಾದಿ ಮತ್ತು ಪ್ರತಿವಾದಿಗಳ ವಾದ ವಿವಾದಗಳನ್ನು ಆಲಿಸಿ ಅವರುಗಳು ಸಲ್ಲಿಸಿದ ಲಿಖಿತ ಹೇಳಿಕೆಯನ್ನು ಹಾಗೂ ಪ್ರಕರಣಕ್ಕೆ ಸಂಬಂಧಪಟ್ಟ ದಾಖಲೆಗಳನ್ನು ಪರಿಶೀಲಿಸಿ, ಸದರಿ ಪ್ರಕರಣದಲ್ಲಿ ಶ್ರೀಮತಿ ಶಾಂತವ್ವ ದುಂಡಪ್ಪ ಜಂಬಗಿ, ಅಧ್ಯಕ್ಷರು ಮತ್ತು ಶ್ರೀಮತಿ ಸವಿತಾ ಸತ್ಯಾನಂದ ವಾಲೀಕಾರ, ಸದಸ್ಯರು, ಕೋಟ್ಯಾಳ ಗ್ರಾಮ ಪಂಚಾಯತ್, ವಿಜಯಪುರ ತಾಲ್ಲೂಕು & ಜಿಲ್ಲೆ ಇವರುಗಳು ಅಧಿಕಾರ ದುರುಪಯೋಗಪಡಿಸಿಕೊಂಡು ತಮ್ಮ ಅಥವಾ ತಮ್ಮ ಸಂಬಂಧಿಕರ ಹೆಸರಿನಲ್ಲಿ ಚೆಕ್ಕುಗಳನ್ನು ಪಡೆದು ಸರ್ಕಾರದ ಹಣ ದುರುಪಯೋಗಪಡಿಸಿಕೊಂಡು ತಮ್ಮ ಕರ್ತವ್ಯಗಳನ್ನು ನಿಭಾಯಿಸುವಲ್ಲಿ ವಿಫಲರಾಗಿದ್ದು ಅವರುಗಳ ಮೇಲೆ ಮಾಡಲಾದ ಆಪಾದನೆಗಳು ನಿಜವೆಂದು ಕಂಡುಬಂದಿರುವುದರಿಂದ ಅವರುಗಳ ಸದಸ್ಯತ್ವವನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿಯಲ್ಲಿ ಸದರಿ ಸದಸ್ಯರ ಸದಸ್ಯತ್ವವನ್ನು ರದ್ದುಗೊಳಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಈ ಪ್ರಕರಣದ ವಿಚಾರಣಾ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ, ಶ್ರೀಮತಿ ಶಾಂತವ್ವ ದುಂಡಪ್ಪ ಜಂಬಗಿ, ಅಧ್ಯಕ್ಷರು ಮತ್ತು ಶ್ರೀಮತಿ ಸವಿತಾ ಸತ್ಯಾನಂದ ವಾಲೀಕಾರ, ಸದಸ್ಯರು, ಕೋಟ್ಯಾಳ ಗ್ರಾಮ ಪಂಚಾಯತ್, ವಿಜಯಪುರ ತಾಲ್ಲೂಕು & ಜಿಲ್ಲೆ ಇವರುಗಳ ವಿರುದ್ಧ ಮಾಡಲಾದ ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ ಶ್ರೀಮತಿ ಶಾಂತವ್ವ ದುಂಡಪ್ಪ ಜಂಬಗಿ, ಅಧ್ಯಕ್ಷರು ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4) ಮತ್ತು 48(5) ರನ್ವಯ ಗ್ರಾಮ ಪಂಚಾಯತ್ ಅಧ್ಯಕ್ಷ ಸ್ಥಾನ ಹಾಗೂ ಸದಸ್ಯತ್ವದಿಂದ ಹಾಗೂ ಶ್ರೀಮತಿ ಸವಿತಾ ಸತ್ಯಾನಂದ ವಾಲೀಕಾರ, ಸದಸ್ಯರು ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿಯಲ್ಲಿ ಸದರಿ ಸದಸ್ಯರ ಸದಸ್ಯತ್ವವನ್ನು ತೆಗೆದುಹಾಕಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 68 ಗ್ರಾಪಂಅ 2020 ಬೆಂಗಳೂರು, ದಿನಾಂಕ:25.02.2020</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಶಾಂತವ್ವ ದುಂಡಪ್ಪ ಜಂಬಗಿ, ಅಧ್ಯಕ್ಷರು, ಕೋಟ್ಯಾಳ ಗ್ರಾಮ ಪಂಚಾಯತ್, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4) ಮತ್ತು 48(5) ರನ್ವಯ ಗ್ರಾಮ ಪಂಚಾಯತ್ ಅಧ್ಯಕ್ಷ ಸ್ಥಾನ ಹಾಗೂ ಸದಸ್ಯತ್ವದಿಂದ ಹಾಗೂ ಶ್ರೀಮತಿ ಸವಿತಾ ಸತ್ಯಾನಂದ ವಾಲೀಕಾರ, ಸದಸ್ಯರು ಕೋಟ್ಯಾಳ ಗ್ರಾಮ ಪಂಚಾಯತ್, ವಿಜಯಪುರ ತಾಲ್ಲೂಕು ಮತ್ತು ಜಿಲ್ಲ ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿಯಲ್ಲಿ ಸದರಿ ಸದಸ್ಯರ ಸದಸ್ಯತ್ವವನ್ನು ತೆಗೆದುಹಾಕಿ ಆದೇಶಿಸಲಾಗಿದೆ. ಹಾಗೂ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 157(2) ಮತ್ತು 246(8) ರಡಿ ದುರುಪಯೋಗಪಡಿಸಿಕೊಂಡಿರುವ ಮೊತ್ತವನ್ನು ಸಂಬಂಧಿಸಿದವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ವಸೂಲಿ ಮಾಡಲು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ವಿಜಯಪುರ ತಾಲ್ಲೂಕು, ವಿಜಯಪುರ ಜಿಲ್ಲೆ ಇವರಿಗೆ ಆದೇಶಿಸಿದೆ ಹಾಗೂ

ಕರ್ತವ್ಯಲೋಪ ಎಸಗಿದ ಅಂದಿನ ಪ್ರಭಾರಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಶ್ರೀ ಬಿ.ಟಿ. ಲಮಾಣಿ ಇವರ ವಿರುದ್ಧ ನಿಯಮಾನುಸಾರ ಶಿಸ್ತಿನ ಕ್ರಮ ಜರುಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ವಿಜಯಪುರ ಇವರಿಗೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar 28/02/2020
**(ಬಿ. ನವೀನ್ ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿ:**

1) ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ.
2) ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ವಿಜಯಪುರ ಜಿಲ್ಲೆ.
4) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ.
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕೋಟ್ಯಾಳ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ.
6) ಶ್ರೀಮತಿ ಶಾಂತವ್ವ ದುಂಡಪ್ಪ ಜಂಬಗಿ, ಅಂದಿನ ಅಧ್ಯಕ್ಷರು, ಕೋಟ್ಯಾಳ ಗ್ರಾಮ ಪಂಚಾಯತ್, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಹಾಗೂ ಶ್ರೀಮತಿ ಸವಿತಾ ಸತ್ಯಾನಂದ ವಾಲೀಕಾರ, ಅಂದಿನ ಸದಸ್ಯರು ಕೋಟ್ಯಾಳ ಗ್ರಾಮ ಪಂಚಾಯತ್, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ (ಇವರಿಗೆ **ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರ ಮುಖಾಂತರ**)

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.
4) ಗಣಕ ಕೋಶ.